**<u>ಸಾಕ್ಷಿಗೆ ದಿನಾಂಕ 25-02-2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: 1 ನೇ ಎದುರುದಾರರ ಪರ ಶ್ರೀ ಎಸ್ ಆರ್ ವಕೀಲರಿಂದಃ</u>**

1. ನಾನು ಈ ಪ್ರಕರಣದಲ್ಲಿ, 1 ನೇ ಎದುರುದಾರರನಾಗಿದ್ದು, ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಸಂಬಂಧಿಸಿದಂತೆ, ನಾನು ಈ ದಿನ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತವೆ. ಅದನ್ನು ನಾನು ಓದಿ ತಿಳಿದುಕೊಂಡು ಸಹಿಮಾಡಿರುತ್ತೇನೆ.

2. ನಾನು ಈ ಪ್ರಕರಣದಲ್ಲಿ ತೆಗೆದುಕೊಂಡಿರುವ ಪ್ರತಿರಕ್ಷೆಗೆ ಸಂಬಂಧಿಸಿದಂತೆ ಈ ಕೆಳಕಂಡ ಧೃಢಿಕೃತ ದಾಖಲೆಗಳನ್ನು ಹಾಜರು ಮಾಡುತ್ತಿದ್ದೇನೆ. ಸಾಕ್ಷಿಹಾಜರು ಮಾಡಿದ ದಾಖಲಾತಿಗಳನ್ನು ಈ ಕೆಳಕಂಡಂತೆ ನಿಶಾನಿಕರಿಸಲಾಗಿರುತ್ತದೆ.:

| | |
|---|---|
| ನಿ.ಅರ್ 1 | 2 ವೈದ್ಯಕೀಯ ಬಿಲ್ಲುಗಳು ಮೊತ್ತ ರೂ.17,500/- |
| ನಿ.ಅರ್ 2 | 1 ಔಷಧಿ ಚೀಟಿಗಳು |

3. ನನ್ನ ಮುಖ್ಯ ವಿಚಾರಣಾ ಸಾಕ್ಷಾ ಹಾಗೂ ದಾಖಲಾತಿಗಳನ್ನು ಪರಿಶೀಲಿಸಿ ಅರ್ಜಿದಾರರ ಅರ್ಜಿಯನ್ನು ವಜಾ ಮಾಡಬೇಕೆಂದು ಪಾರ್ಥಿಸಿಕೊಳ್ಳುತ್ತೇನೆ.

**ಪಾಟೀಸವಾಲುಃ ಅರ್ಜಿದಾರರ ಪರ ಕು.ಹೆಚ್.ಕೆ. ವಕೀಲರು ಶ್ರೀಮತಿ ಎ.ಕೆ. ವಕೀಲರ ಪರವಾಗಿಃ**

1. ನನ್ನ ಮುಖ್ಯ ವಿಚಾರಣಾ ಪ್ರಮಾಣಪತ್ರವನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. 6 ನೇ ಮಧ್ಯಂತರ ಅರ್ಜಿಯ ಜೊತೆ ಲಗತ್ತಿರುವ ನನ್ನ ಪ್ರಮಾಣಪತ್ರದ 3 ನೇ ಕಂಡಿಕೆಯಲ್ಲಿ ನನಗೆ ಅನಾರೋಗ್ಯವಾಗಿದ್ದು ಆ ಕಾರಣದಿಂದ ನ್ಯಾಯಾಲಯಕ್ಕೆ ಹಾಜರಾಗಿರುವುದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಅಪಘಾತವು ನನ್ನ ತಪ್ಪಿನಿಂದ ಆಗಿದೆ ಎಂದರೆ ಸರಿಯಲ್ಲ. ನಿಆರ್.1 ಮತ್ತು 2 ಸೃಷ್ಟಿತ ದಾಖಲೆಗಳು ಎಂದರೆ ಸರಿಯಲ್ಲ.

2. ಪೊಲೀಸರು ನನ್ನ ವಿರುದ್ಧ ಸಲ್ಲಿಸಿರುವ ದೋಷಾರೋಪಣಾಪಟ್ಟಿಯನ್ನು ಪ್ರಶ್ನಿಸಿರುವುದಿಲ್ಲ ಎಂದರೆ ಸರಿ. ಸಾಕ್ಷಿ ಮುಂದುವರೆದು ಅಪರಾಧಿಕ ಪ್ರಕರಣವು ವಿಚಾರಣೆ ಹಂತದಲ್ಲಿದೆ ಎಂದು ನುಡಿಯುತ್ತಾರೆ. ಪರಿಹಾರ ನೀಡುವ ಬಾಧ್ಯತೆಯಿಂದ ತಪ್ಪಿಸಿಕೊಳ್ಳುವ ಸಲುವಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನೀಡುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು-ವಿಚಾರಣೆಃ ಇಲ್ಲ.

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**